# ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು:560001

ಸಂಖ್ಯೆ: ಸಹನಿಶಾಶಿ.ಆಶಾ/ಕ.ವ.ಕು.ಪಾ.ಸು/32544/ಇ.ಎ.2020 ದಿನಾಂಕ: 17-4-2020

## ಸುತ್ತೋಲೆ

ವಿಷಯ: ಖಾಸಗಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಂದ ಆನ್‌ಲೈನ್ ಭೋದನಾ ಶುಲ್ಕ ಪಡೆಯುವ ಬಗ್ಗೆ.

ಉಲ್ಲೇಖ: (1)ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:24-3-2020, ದಿ: 30-3-2020

(2)ದಿನಾಂಕ: 17-4-2020ರಂದು ಮಾನ್ಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೈಗೊಂಡ ತೀರ್ಮಾನದಂತೆ

(3)ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಆಕುಕ/54/ಸಿಜಿಎಂ/2020 ದಿ: 23-3-2020

(4)ಸಾಂಕ್ರಾಮಿಕ ರೋಗಗಳ ಅಧಿನಿಯಮ 1897 ಸೆಕ್ಷನ್ - 3

******

ಸರ್ಕಾರಿ/ಅನುದಾನಿತ/ಅನುದಾನ ರಹಿತ ಶಾಲೆಗಳು 2020-21ನೇ ಸಾಲಿನ ಮಕ್ಕಳ ದಾಖಲಾತಿಯನ್ನು ಸರ್ಕಾರದ ಮುಂದಿನ ಆದೇಶದವರೆಗೆ ಮುಂದೂಡುವಂತೆ ಈಗಾಗಲೇ ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 24-3-2020ರಲ್ಲಿ ಸೂಚಿಸಲಾಗಿತ್ತು, ಹಾಗೂ 2019-20ನೇ ಸಾಲಿನಲ್ಲಿ ವ್ಯಾಸಂಗ ಮಾಡಿ ತೇರ್ಗಡೆಗೊಂಡು ಅದೇ ಶಾಲೆಯಲ್ಲಿ ಮುಂದಿನ ತರಗತಿಗೆ ದಾಖಲಾಗುವ ವಿದ್ಯಾರ್ಥಿಗಳ ದಾಖಲಾತಿ ಶುಲ್ಕವನ್ನು ಪಡೆಯುವುದನ್ನು ಹಾಗೂ 2020-21ನೇ ಸಾಲಿನ ದಾಖಲಾತಿ ಪ್ರಕ್ರಿಯೆ ಮತ್ತು ಶುಲ್ಕ ವಸೂಲಾತಿ ಮಾಡುವುದನ್ನು ಸಹ ಸರ್ಕಾರದ ಮುಂದಿನ ಆದೇಶದವರೆಗೆ ಮುಂದೂಡುವಂತೆ ಈ ಕಛೇರಿಯ ಉಲ್ಲೇಖ (1)ರ ಸುತ್ತೋಲೆ ದಿನಾಂಕ:30-3-2020 ರ ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

ಆದರೆ, ಖಾಸಗಿ ಶಾಲೆಗಳು ಆನ್‌ಲೈನ್ ಮೂಲಕ ವಿದ್ಯಾರ್ಥಿಗಳಿಗೆ ಭೋದನೆ, ಪಾಠಪ್ರವಚನ, ನಡೆಸುತ್ತಿದ್ದು, ಈ ಸಂಬಂಧ ಅಗತ್ಯ ಶುಲ್ಕ ಪಾವತಿಸುವಂತೆ ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ದೂರವಾಣಿ, ಇಮೇಲ್ ಮತ್ತು ಎಸ್.ಎಂ.ಎಸ್ ಮೂಲಕ ಸೂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಈ ಹಿನ್ನೆಲ್ಲೆಯಲ್ಲಿ ದಿನಾಂಕ: 17-4-2020ರಂದು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಿದ್ದು, ಖಾಸಗಿ ಶಾಲೆಗಳು ಆನ್‌ಲೈನ್ ಮೂಲಕ ವಿದ್ಯಾರ್ಥಿಗಳಿಗೆ ಭೋದನೆ, ಪಾಠಪ್ರವಚನ ನಡೆಸಲು ಸರ್ಕಾರದ ಯಾವುದೇ ಅಭ್ಯಂತರವಿಲ್ಲ. ಆದರೆ, ಖಾಸಗಿ ಶಾಲೆಗಳು ಆನ್‌ಲೈನ್ ಭೋದನೆಯನ್ನು ನೆಪವಾಗಿ ಇಟ್ಟುಕೊಂಡು ವಿದ್ಯಾರ್ಥಿಗಳಿಂದ ಮತ್ತು ಪೋಷಕರಿಂದ ಶುಲ್ಕವನ್ನು ಪಡೆಯುವಂತಿಲ್ಲವೆಂದು ಸದರಿ ಸಭೆಯಲ್ಲಿ ನಿರ್ಧರಿಸಲಾಗಿರುತ್ತದೆ.

ಆದ್ದರಿಂದ, ಖಾಸಗಿ ಶಾಲೆಗಳಿಂದ ಆನ್‌ಲೈನ್ ಮೂಲಕ ವಿದ್ಯಾರ್ಥಿಗಳಿಗೆ ಪಾಠಪ್ರವಚನಗಳನ್ನು ನಡೆಸಲು ಅವಕಾಶ ನೀಡಿದೆ. ಆದರೆ ಈ ಸಂಬಂಧದಲ್ಲಿ ವಿದ್ಯಾರ್ಥಿಗಳಿಂದ ಮತ್ತು ಪೋಷಕರಿಂದ ಆನ್‌ಲೈನ್ ಭೋದನೆ ಶುಲ್ಕವೂ ಸೇರಿದಂತೆ ದಾಖಲಾತಿ ಶುಲ್ಕ, ಶಾಲಾ ಶುಲ್ಕ ಅಥವಾ ಬೇರೆ ಯಾವುದೇ ಶುಲ್ಕವನ್ನು ಸರ್ಕಾರದ ಮುಂದಿನ ಆದೇಶದವರೆಗೆ ಪಡೆಯುವಂತಿಲ್ಲವೆಂದು ಎಲ್ಲಾ ಖಾಸಗಿ ಶಾಲಾ ಆಡಳಿತ ಮಂಡಳಿಗಳಿಗೆ ಸೂಚಿಸಿದೆ, ಹಾಗೂ ಈ ಬಗ್ಗೆ ಪೋಷಕರ ಮೇಲೆ ಯಾವುದೇ ಒತ್ತಡ ಹೇರುವಂತಿಲ್ಲವೆಂದು ಮತ್ತೊಮ್ಮೆ ಸ್ಪಷ್ಟೀಕರಿಸಿದೆ.

ಶಾಲಾ ಆಡಳಿತ ಮಂಡಳಿಗಳು ಮೇಲ್ಕಂಡ ಸೂಚನೆಗಳನ್ನು ಪಾಲಿಸದೇ ಇರುವುದು/ಉಲ್ಲಂಘಿಸಿರುವುದು ಕಂಡು ಬಂದಲ್ಲಿ ಉಲ್ಲೇಖ (3) ರ ಸರ್ಕಾರದ ಆದೇಶದ ಕಂಡಿಕೆ (7) ಮತ್ತು ಸಾಂಕ್ರಾಮಿಕ ರೋಗಗಳ ಅಧಿನಿಯಮ 1897ರ ಸೆಕ್ಷನ್ 3 ರಂತೆ ಪ್ರಕರಣ ದಾಖಲಿಸಿ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು.

ಈ ಸುತ್ತೋಲೆಯನ್ನು ಇಮೇಲ್/ವಾಟ್ಸ್ಅಪ್ ಹಾಗೂ ಇತರೇ ಎಲೆಕ್ಟ್ರಾನಿಕ್ ಮಾಧ್ಯಮದ ಮೂಲಕ ಎಲ್ಲಾ ಶಾಲೆಗಳ ಆಡಳಿತ ಮಂಡಳಿಗಳಿಗೆ/ಶಾಲಾ ಮುಖ್ಯ ಶಿಕ್ಷಕರಿಗೆ ತಲುಪಿಸಲು ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರವರು ಅಗತ್ಯ ಕ್ರಮ ಕೈಗೊಳ್ಳುವುದು.

17/4/20

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.

ಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ (ಜಿಲ್ಲಾ ಉಪನಿರ್ದೇಶಕರ ಮುಖಾಂತರ)
3. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನ ರಹಿತ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ಸೂಕ್ತ ಕ್ರಮಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)

ಪ್ರತಿಯನ್ನು

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಸನ್ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ಮಾಹಿತಿಗಾಗಿ.